# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

### ವಾರ್ಡ್ ನಂ.71 : ಹೆಗ್ಗನಹಳ್ಳಿ

**ದಿನಾಂಕ: 04.09.2021 ರಂದು ಬೆಳಿಗ್ಗೆ 11.00 ಗಂಟೆಗೆ ಶ್ರೀ ಬಿ.ಆರ್ ರವಿಕುಮಾರ್ ನೋಡಲ್ ಅಧಿಕಾರಿ, ವಾರ್ಡ್ 71 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

ಸಭೆಯಲ್ಲಿ ಹಾಜರಿದ್ದವರು:

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಬಿ.ಆರ್ ರವಿಕುಮಾರ್ | ನೋಡಲ್ ಅಧಿಕಾರಿ–ವಾರ್ಡ್ ನಂ.71, ಸಹಾಯಕ ನಿರ್ದೇಶಕರು (ಪಶುಪಾಲನೆ) |
| 2 | ಶ್ರೀ ಮಂಜುನಾಥ್ ಡಿ ಎಸ್ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು–ವಾರ್ಡ್ 71 |
| 3 | ರಾಮಣ್ಣ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.71 |
| 4 | ವೆಂಕಟರಾಜು | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ |
| 5 | ಹೆಚ್ ಟಿ ಮುನಿರಾಜು | ಕಂದಾಯ ವಸೂಲಿಗಾರರು– ವಾರ್ಡ್ 71 |
| 6 | ಎನ್ ಮುರುಳಿ | ಕಂದಾಯ ವಸೂಲಿಗಾರರು– ವಾರ್ಡ್ 71 |
| 7 | ಎಂ ಎಲ್ ರವಿಕುಮಾರ್ | ಎಂ ಓ ಹೆಚ್ |
| 8 | ಸುರೇಶ್ | ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.71 |
| 9 | ಎಂ ಎಲ್ ರವಿಕುಮಾರ್ | ಎಂ ಓ ಹೆಚ್ |
| 10 | ಡಾ.ಅಂಬರೀಶ್ | ಕೋವಿಡ್ ಅಧಿಕಾರಿ |

:ನಡಾವಳಿಯ ವರದಿ:

➢ ಕಾರ್ಯದರ್ಶಿಗಳಾದ ಶ್ರೀ ಡಿ.ಎಸ್.ಮಂಜುನಾಥ್ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

- **<u>ಕೋವಿಡ್–19, ಸಾಂಕ್ರಾಮಿಕ ರೋಗದ ಬಗ್ಗೆ</u>**
  - ಸಭೆಯಲ್ಲಿ ರಾಮಣ್ಣ, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.71 ರವರು 04/09/2021ರವರೆಗಿನ ಲಸಿಕಾಕರಣ ಹಾಗೂ ಕೋವಿಡ್ ತಪಾಸಣೆಗಾಗಿ ಸಂಬಂಧಿಸಿದ ವಿವರಗಳನ್ನು ಸಭೆಯಲ್ಲಿ ತಿಳಿಸಲಾಯಿತು.
- ಶ್ರೀ ಬಿ.ಆರ್ ರವಿಕುಮಾರ್, ನೋಡಲ್ ಅಧಿಕಾರಿರವರು ಮಾತನಾಡಿ ಕೋವಿಡ್ ಸೋಂಕು ವಾರ್ಡ್ ವ್ಯಾಪ್ತಿಯಲ್ಲಿ ಬೆರಳಣಿಕೆಯಲ್ಲಿ ಸೋಂಕು ಪತ್ತೆಯಾಗುತ್ತಿದ್ದು, ಇಳಿಕೆ ಕಾಣುತ್ತಿದ್ದರೂ ಸಹ ಮಾಸ್ಕ್ ಧರಿಸುವ ಹಾಗೂ ಸಾಮಾಜಿಕ

ಅಂತರ ಕಾಯ್ದುಕೊಳ್ಳುವ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವಂತೆ ಸೂಚಿಸಿದರು ಹಾಗೂ ಸಾರ್ವಜನಿಕರಲ್ಲಿ ಲಸಿಕೆ ಹಾಕಿಸಿಕೊಳ್ಳುವ ಬಗ್ಗೆ ಹೆಚ್ಚಿನ ಪ್ರಚಾರ ಕೈಗೊಂಡು ಅರಿವು ಮೂಡಿಸುವಂತೆ ಸೂಚಿಸಿದರು.

- ಶ್ರೀ ಬಿ.ಆರ್ ರವಿಕುಮಾರ್, ನೋಡಲ್ ಅಧಿಕಾರಿರವರು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನುದ್ದೇಶಿಸಿ ಮಾತನಾಡಿ, ಕೋವಿಡ್-19ಗೆ ಸಂಬಂಧಪಟ್ಟಂತೆ ಸರಬರಾಜು ಮಾಡಲಾಗುವ ವ್ಯಾಕ್ಸಿನ್‌ಗಳು, ಮೆಡಿಕಲ್ ಕಿಟ್ ಗಳು ಹಾಗೂ ಇನ್ನಿತರ ವಿವರಗಳನ್ನು ವಹಿಗಳಲ್ಲಿ ತಪ್ಪದೇ ದಾಖಲಿಸಿ, ವಹಿಗಳನ್ನು ಸಮರ್ಪಕವಾಗಿ ನಿರ್ವಹಿಸಿ ದಾಖಲೆಗಳನ್ನು ಇಟ್ಟುಕೊಳ್ಳಲು ಸೂಚಿಸಿದರು.ಎಲ್ಲಾ ಸಮಿತಿ ಸದಸ್ಯರುಗಳು/ ಅಧಿಕಾರಿಗಳು/ WDC ಸದಸ್ಯರುಗಳು ವಾರ್ಡ್‌ನ ವ್ಯಾಪ್ತಿಯಲ್ಲಿ ಕೋವಿಡ್-19 ಪಿಡುಗನ್ನು ತಡೆಗಟ್ಟಲು ಎಲ್ಲರೂ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಲು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

## BBMP SAHAYA APP:

- ಡಿ.ಎಸ್.ಮಂಜುನಾಥ್ ಸಹಾಯಕ ಅಭಿಯಂತರರು, ವಾರ್ಡ್ ನಂ.71 ಮಾತನಾಡಿ ನಮ್ಮ ಇಲಾಖೆಗೆ ಸಂಬಂಧಪಟ್ಟ ದೂರುಗಳಿಗೆ ಶೀಘ್ರಗತಿಯಲ್ಲಿ ಪರಿಹಾರಕ್ರಮ ಕೈಗೊಳ್ಳುತ್ತಿದ್ದು, ಯಾವುದೇ ಸಮಸ್ಯೆಗಳು ಬಾಕಿ ಇರುವುದಿಲ್ಲ ಎಂದು ತಿಳಿಸಿದರು.

ಸದಸ್ಯ ಕಾರ್ಯದರ್ಶಿ-ವಾರ್ಡ್ 71 ಹಾಗೂ
ಸಹಾಯಕ ಅಭಿಯಂತರರು,

(ಬಿ.ಆರ್ ರವಿಕುಮಾರ್)
ನೋಡಲ್ ಅಧಿಕಾರಿ ವಾರ್ಡ್-71

ಪ್ರತಿಯನ್ನು:

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.70 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ